11

# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ** | **195** |
| ಸದಸ್ಯರ ಹೆಸರು | ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 14.12.2021 |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| ಅ. | ರಾಜ್ಯದಲ್ಲಿ ಮರಳು ಗಣಿಗಾರಿಕೆಗೆ ಅವಕಾಶ ಕಲ್ಪಿಸಲಾಗಿದೆಯೇ; ಕಲ್ಪಿಸಿದ್ದಲ್ಲಿ, ಮರಳು ಗಣಿಗಾರಿಕೆಗೆ ಸರ್ಕಾರ ರೂಪಿಸಿರುವ ನಿಯಮ ಹಾಗೂ ಮಾನದಂಡಗಳೇನು; | ಹೌದು.<br>ಪ್ರಸ್ತುತ, ಹೊಸ ಮರಳು ನೀತಿ, 2020 ರಂತೆ ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು, 2021 ನ್ನು ಜಾರಿಗೊಳಿಸಲಾಗಿರುತ್ತದೆ.<br>**(ನಿಯಮಗಳ ಪ್ರತಿಯನ್ನು ಅನುಬಂಧ-1 ರಲ್ಲಿ ನೀಡಲಾಗಿದೆ)**<br>ಸದರಿ ತಿದ್ದುಪಡಿ ನಿಯಮಗಳ ಪ್ರಮುಖ ಅಂಶಗಳು ಈ ಕೆಳಕಂಡಂತಿವೆ.<br>• ಸರ್ಕಾರವು ಅಧಿಸೂಚನೆ ಮೂಲಕ ನಿಗದಿಪಡಿಸಿದ ರಾಜ್ಯ ಸರ್ಕಾರಿ ಸ್ವಾಮ್ಯದ ಸಂಸ್ಥೆ / ಕಾರ್ಪೋರೇಷನ್/ ನಿಗಮ / ಮಂಡಳಿಗಳಿಗೆ ಮರಳು ತೆಗೆಯಲು / ಗಣಿಗಾರಿಕೆ ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ.<br>• I, II ಮತ್ತು III ನೇ ಶ್ರೇಣಿಯ ಹಳ್ಳ / ತೊರೆ ಮತ್ತು ಕೆರೆಗಳಲ್ಲಿ ಲಭ್ಯವಿರುವ ಮರಳನ್ನು ತೆಗೆಯುವ ಮತ್ತು ವಿಲೇವಾರಿ ಮಾಡುವ ಸಂಪೂರ್ಣ ಹೊಣೆಗಾರಿಕೆಯನ್ನು ಸಂಬಂಧಿಸಿದ ಗ್ರಾಮ ಪಂಚಾಯಿತಿಗಳಿಗೆ ವಹಿಸಲಾಗಿರುತ್ತದೆ.<br>• IV, V ಮತ್ತು VI ನೇ ಶ್ರೇಣಿಯ ಹೊಳೆ / ನದಿಗಳಲ್ಲಿ ಲಭ್ಯವಿರುವ ಮರಳನ್ನು ಮತ್ತು ಅಣೆಕಟ್ಟು / ಜಲಾಶಯ / ಬ್ಯಾರೇಜ್‌ಗಳು ಮತ್ತು ಸದರಿ ಹಿನ್ನೀರಿನ ಪ್ರದೇಶಗಳಲ್ಲಿ ಹೂಳು ತೆಗೆಯುವ ಮುಖಾಂತರ ದೊರೆತ ಮರಳನ್ನು ವಿಲೇಪಡಿಸಲು ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಾದ ಮೆ\|\| ಕರ್ನಾಟಕ ಸ್ಟೇಟ್ ಮಿನರಲ್ ಕಾರ್ಪೋರೇಷನ್ ಲಿ., ಮತ್ತು ಮೆ\|\| ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತ ಇವರಿಗೆ ವಹಿಸಲಾಗಿರುತ್ತದೆ.<br>• ಬೃಹತ್ ಕಾಮಗಾರಿ ನಿರ್ವಹಿಸುವ ಸರ್ಕಾರಿ ಇಲಾಖೆ/ ಸಂಸ್ಥೆಗಳಿಗೆ IV, V ಮತ್ತು VI ನೇ ಶ್ರೇಣಿಯ ಹೊಳೆ / ನದಿ ಪಾತ್ರಗಳಲ್ಲಿ ಹಾಗೂ ಜಲಾಶಯ/ ಅಣೆಕಟ್ಟು/ ಬ್ಯಾರೇಜ್ ಹಾಗೂ ಹಿನ್ನೀರಿನ ಪ್ರದೇಶಗಳಲ್ಲಿ ಮರಳು ತೆಗೆದು ಬಳಸಿಕೊಳ್ಳಲು ಅವಕಾಶ ಕಲ್ಪಿಸಿದೆ. |